# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1441
ಮಾನ್ಯ ಸದಸ್ಯರ ಹೆಸರು : ಶ್ರೀಮತಿ ಬಲ್ಕೀಸ್ ಬಾನು (ವಿಧಾನ ಸಭೆಯಿಂದ ಚುನಾಯಿತರಾದವರು),
ಉತ್ತರಿಸುವ ದಿನಾಂಕ : **20.03.2025**
ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಷೇರು ಮಾರುಕಟ್ಟೆ ಆಧಾರಿತ ಎನ್.ಪಿ.ಎಸ್ ಯೋಜನೆಯು ಕೇಂದ್ರ ಸರ್ಕಾರದ ಪಿ.ಎಫ್.ಆರ್.ಡಿ.ಎ (PFRDA) ಕಾಯಿದೆ ಅಡಿ ಬರುವುದು ನಿಜವೇ; ಹೌದಾದಲ್ಲಿ PFRDA ಕಾಯಿದೆ ಯಾವ ಯಾವ ಷರತ್ತುಗಳಿಗೆ ಒಳಪಟ್ಟಿರುತ್ತದೆ; | ಹೌದು.<br>ರಾಷ್ಟ್ರೀಯ ಪಿಂಚಣಿ ಯೋಜನೆಯು ಕೇಂದ್ರ ಸರ್ಕಾರದ ಪಿ.ಎಫ್.ಆರ್.ಡಿ.ಎ (PFRDA) ಅಧಿನಿಯಮ 2013ರ ಅಧ್ಯಾಯ-III, ಅಧ್ಯಾಯ – V, ಅಧ್ಯಾಯ – VI ಮತ್ತು ಅಧ್ಯಾಯ – X ರ ನಿಯಮಗಳಲ್ಲಿನ ಅವಕಾಶಗಳ ನಿಬಂಧನೆಗಳಿಗೆ ಒಳಪಟ್ಟಿರುತ್ತದೆ. |
| ಆ) | PFRDA ಕಾಯಿದೆ ಅಡಿ ಈ ಯೋಜನೆ ಬರುವುದರಿಂದ ರಾಜ್ಯ ಸರ್ಕಾರ ಪೂರ್ಣಪ್ರಮಾಣದ ನಿಶ್ಚಿತ ಪಿಂಚಣಿ ಯೋಜನೆ ಜಾರಿಗೊಳಿಸಲು ಕ್ರಮ ಕೈಗೊಂಡಲ್ಲಿ, ಏಪ್ರಿಲ್-2006 ರಿಂದ ಕಟಾವಣೆಯಾಗಿರುವ ಎನ್.ಪಿ.ಎಸ್ ವಂತಿಗೆಯ ಮೊತ್ತ ಮರಳಿ ನೌಕರರ ಜಿ.ಪಿ.ಎಫ್ ಖಾತೆಗೆ ವರ್ಗಾವಣೆಗೊಳ್ಳುವುದೆ; | ರಾಜ್ಯದಲ್ಲಿ ಜಾರಿಯಲ್ಲಿರುವ ರಾಷ್ಟ್ರೀಯ ಪಿಂಚಣಿ ಯೋಜನೆಯ ಬದಲಾಗಿ ಹಳೆಯ ಪಿಂಚಣಿ ಯೋಜನೆಯನ್ನು ಜಾರಿಮಾಡುವ ಸಾಧ್ಯತೆಗಳ ಕುರಿತು ಪರಿಶೀಲಿಸಲು ಈಗಾಗಲೇ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 11.12.2018ರ ಮತ್ತು ದಿನಾಂಕ: 01.03.2023 ರ ಸರ್ಕಾರಿ ಆದೇಶಗಳನ್ವಯ ರಚಿಸಲಾಗಿರುವ ಸಮಿತಿಯನ್ನು ದಿನಾಂಕ: 16.08.2024 ರಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಪುನರ್ ರಚಿಸಿ ಆದೇಶಿಸಲಾಗಿದೆ. |
| ಇ) | ಏಪ್ರಿಲ್ 2006ಕ್ಕೆ ಹಿಂದೆ ಇದ್ದ ನಿಶ್ಚಿತ ಪಿಂಚಣಿ ಯೋಜನೆಯನ್ನು ಯಥವತ್ತಾಗಿ ಮರುಸ್ಥಾಪಿಸಲು ರಾಜ್ಯ ಸರ್ಕಾರ ಯಾವ ಯಾವ ಕ್ರಮ ತೆಗೆದುಕೊಂಡಿದೆ; | |
| ಈ) | ಇತ್ತೀಚೆಗೆ ಕೇಂದ್ರ ಸರ್ಕಾರಿ ನೌಕರರಿಗೆ ಯು.ಪಿ.ಎಸ್. ಜಾರಿ ಮಾಡಿದ್ದು, ರಾಜ್ಯ/ಕೇಂದ್ರ ಸರ್ಕಾರಿ ನೌಕರರು ಈ ಮಾರ್ಪಡಿತ ಯೋಜನೆಯನ್ನು ಒಪ್ಪದೇ ಹೋರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹೌದಾದಲ್ಲಿ ಯಾವ ಮಾರ್ಪಾಡನ್ನೂ ಒಳಗೊಳ್ಳದೆ ಹಿಂದಿನ ನಿಶ್ಚಿತ ಪಿಂಚಣಿ ರಾಜ್ಯದಲ್ಲಿ ಜಾರಿ ಮಾಡುವ ಯೋಜನೆಯನ್ನು ಮರುಸ್ಥಾಪಿತವಾಗುವುದೆ; ಹೌದಾದಲ್ಲಿ ಯಾವ ಕಾಲಮಿತಿಯೊಳಗೆ ಈ ಸಂಬಂಧ ಆದೇಶ ಹೊರಡಿಸಲಾಗುವುದು? | ಸಮಿತಿಗೆ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯನ್ನು ಮರು ಜಾರಿ ಮಾಡಿರುವ ರಾಜ್ಯಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಿರುವ ಕುರಿತು ಕೈಗೊಂಡಿರುವ ಕ್ರಮದ ಬಗ್ಗೆ ಅಧ್ಯಯನ ನಡೆಸಿ ವರದಿ ಸಲ್ಲಿಸಲು ಸೂಚಿಸಿದೆ. |

ಆಇ- ಪಿಇಎನ್/112/2025

(ಸಿದ್ದರಾಮಯ್ಯ)
**ಮುಖ್ಯಮಂತ್ರಿ**